**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ಧನಂಜಯ ಸರ್ಜಿ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಇಂಧನ ಸಚಿವರ ಉತ್ತರ**

**ವಿಷಯ:** "ಹೊಸ ವಿದ್ಯುತ್ ಸಂಪರ್ಕಕ್ಕೆ ಒಸಿ ಬಿಸಿ" ಎಂಬ ಬರಹದಡಿಯಲ್ಲಿ ಹಲವಾರು ಪತ್ರಿಕೆಗಳ ವರದಿಯಲ್ಲಿ ಪ್ರಕಟವಾಗಿರುವಂತೆ ರಾಜ್ಯದಲ್ಲಿ ಹೊಸ ವಿದ್ಯುತ್ ಸಂಪರ್ಕಗಳಿಗೆ ಸ್ವಾಧೀನಾನುಭವ ಪತ್ರ (ಒ.ಸಿ) ಕಡ್ಡಾಯಗೊಳಿಸಿರುವುದರಿಂದ, ಕಟ್ಟಡ ನಿರ್ಮಾಣ ಹಾಗೂ ಕೈಗಾರಿಕೋದ್ಯಮಕ್ಕೆ ಹೊಸ ಸಮಸ್ಯೆ ಶುರುವಾಗಿದೆ. ವಿದ್ಯುತ್ ವಿತರಣಾ ಕಂಪನಿಗಳು (ಬೆಸ್ಕಾಂ ಎಸ್ಕಾಂ ಇತರೆ) ವಿದ್ಯುತ್ ಸಂಪರ್ಕ ನೀಡುವುದಕ್ಕೆ ನಿರಾಕರಿಸುತ್ತಿದ್ದು, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ ಆದೇಶವು ಕಟ್ಟಡ ಮಾಲೀಕರ ಜೊತೆಗೆ ಇಂಧನ ಇಲಾಖೆಗೂ ಸಂಕಷ್ಟ ತಂದೊಡ್ಡಿದೆ.

ಒ.ಸಿ. ಕಡ್ಡಾಯದಿಂದ 2 ಲಕ್ಷಕ್ಕೂ ಹೆಚ್ಚು ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಸಿಗದೆ ತೊಂದರೆ ಅನುಭವಿಸುವಂತಾಗಿದೆ. ಬೆಂಗಳೂರು ಸೇರಿದಂತೆ ರಾಜ್ಯದಲ್ಲೆಡೆ 3 ಲಕ್ಷಕ್ಕೂ ಅಧಿಕ ಜನರು ಮನೆ / ಕಟ್ಟಡ ನಿರ್ಮಾಣ ಕಾರ್ಯಗಳನ್ನು ಅರ್ಧಕ್ಕೆ ನಿಲ್ಲಿಸಬೇಕಾದ ಪರಿಸ್ಥಿತಿ ಎದುರಾಗಿದೆ.

ಸರ್ಕಾರವೇ ಪ್ರತಿಯೊಬ್ಬರಿಗೂ ಸೂರು ಒದಗಿಸುವ ಜವಾಬ್ದಾರಿ ಹೊಂದಿದ್ದು, ಈಗಿನ ಕಾಲಘಟ್ಟದಲ್ಲಿ ವಿದ್ಯುತ್ ಸೌಲಭ್ಯವೂ ಗಾಳಿ-ಬೆಳಕಿನಷ್ಟೆ ಅತ್ಯಗತ್ಯವಾದ ಮೂಲಭೂತ ಅವಶ್ಯಕತೆಯಾಗಿದೆ. ಬಡವರು-ಜನಸಾಮಾನ್ಯರು ತಮ್ಮ ಸಾಮರ್ಥ್ಯಕ್ಕಾನುಗುಣವಾಗಿ ತಮ್ಮ ಇ-ಖಾತೆ ನಿವೇಶನಗಳಲ್ಲಿ ನಿರ್ಮಿಸಿಕೊಂಡಿರುವ ಸಣ್ಣ ಮನೆಗಳಿಗೂ ವಿದ್ಯುತ್ ಸಂಪರ್ಕ ಪಡೆಯಲು ಸಾಧ್ಯವಾಗದೆ ಇರುವುದು, ದುರಂತವೇ ಸರಿ.

ಸದರಿ ಆದೇಶಕ್ಕೂ ಮುನ್ನ ಅರ್ಜಿ ಸಲ್ಲಿಸಿದವರಿಗೆ ಕೂಡಲೇ ವಿದ್ಯುತ್ ಸಂಪರ್ಕ ಕಲ್ಪಿಸಲು ಆದೇಶ ಹೊರಡಿಸುವುದು ಹಾಗೂ ದೊಡ್ಡ ದೊಡ್ಡ ಬೃಹತ್ ವಸತಿ ಸಮುಚ್ಚಯ, ವಾಣಿಜ್ಯ ಕಟ್ಟಡ ಹೊರತು ಪಡಿಸಿ ಇನ್ನಿತರೆ ಕಟ್ಟಡಗಳಿಗೆ ಯಾವುದೇ ಅಡೆತಡೆಗಳಿಗಲ್ಲದೆ ವಿದ್ಯುತ್ ಸಂಪರ್ಕ ಕಲ್ಪಿಸಲು ಈ ಕೂಡಲೇ ಸೂಕ್ತ ವ್ಯವಸ್ಥೆ ಮಾಡುವುದು, ಅಗತ್ಯವಿದ್ದಲ್ಲಿ ನ್ಯಾಷನಲ್ ಬಿಲ್ಡಿಂಗ್ ಕೋಡ್ -2016 ರ ಆದೇಶಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು ದಿ:25-06-25 ರಲ್ಲಿ ದೇಶದ ಎಲ್ಲಾ ರಾಜ್ಯಗಳಿಗೆ ನಿರ್ದೇಶನ ನೀಡಿದ್ದು ಆ ನಿರ್ದೇಶನದಲ್ಲಿ Hence, buildings and matters like norms for Floor Area Ratio/Floor Space Index, set back, ground coverage, parking, green area, fire regulation ect. As well as other aspects covered in National building Code are within the exclusive legislative and executive jurisdiction of the states. ಎಂದು ತಿಳಿಸಿರುವಂತೆ ಪ್ರಸ್ತುತ ಇರುವ ಕಾಯ್ದೆಗೆ ತಿದ್ದುಪಡಿ ತಂದು ಜನಸಾಮನ್ಯರ ಮತ್ತು ಬಡವರ ಹಿತ ಕಾಪಡುವಂತೆ ಶೂನ್ಯವೇಳೆಯಲ್ಲಿ ಮಾನ್ಯ ಇಂಧನ ಸಚಿವರ ಹೇಳಿಕೆ.

* * * * *

**ಉತ್ತರ** : - ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ:17.12.2024ರ ಆದೇಶದಲ್ಲಿ ವಿದ್ಯುತ್ ಸಂಪರ್ಕ ನೀಡುವ ಮುನ್ನ ವಿದ್ಯುತ್ ಸರಬರಾಜು ಕಂಪನಿಗಳು, ಸದರಿ ಕಟ್ಟಡಗಳ ಮಾಲೀಕರು ಒಸಿ ಮತ್ತು ಸಿಸಿ ಹಾಜರುಪಡಿಸಿದ ನಂತರವೇ ವಿದ್ಯುತ್ ಸಂಪರ್ಕ ನೀಡುವಂತೆ ಆದೇಶಿಸಿರುತ್ತದೆ. ಸದರಿ ಆದೇಶವು ಹಾಲಿ ಬಾಕಿ ಇರುವ ಎಲ್ಲಾ ಅರ್ಜಿಗಳಿಗೆ ಅನ್ವಯವಾಗುವುದರಿಂದ ಒಸಿ ಮತ್ತು ಸಿಸಿ ಹಾಜರು ಪಡಿಸಿರುವ ಎಲ್ಲಾ ಪ್ರಕರಣಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿರುತ್ತದೆ. ಸದರಿ ಆದೇಶವು ಎಲ್ಲಾ ವಿಧದ ನಿವೇಶನಗಳಲ್ಲಿ ನಿರ್ಮಿಸಿರುವ ಕಟ್ಟಡಗಳಿಗೆ ಅನ್ವಯಿಸುತ್ತದೆ.

"ಹೊಸ ವಿದ್ಯುತ್ ಸಂಪರ್ಕಕ್ಕೆ ಒಸಿ ಬಿಸಿ" ಎಂಬ ಬರಹದಡಿಯಲ್ಲಿ ಹಲವಾರು ದಿನ ಪತ್ರಿಕೆಗಳಲ್ಲಿ ಪ್ರಕಟವಾಗಿರುವ ಕುರಿತು.

ಸಿವಿಲ್ ಅಪೀಲ್ ಸಂಖ್ಯೆ: 14604/2024 ಪ್ರಕರಣದಲ್ಲಿ ದಿನಾಂಕ:17.12.2024 ರಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನಧಿಕೃತ ಕಟ್ಟಡಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಕಟ್ಟಡಗಳಿಗೆ ನಕ್ಷೆ ಮಂಜೂರಾತಿ ಹಾಗೂ ಸ್ವಾಧೀನಾನುಭವ ಪ್ರಮಾಣ ಪತ್ರ ನೀಡುವುದನ್ನು ಕಡ್ಡಾಯಗೊಳಿಸಿ, ನಕ್ಷೆ ಮಂಜೂರಾತಿ ಹಾಗೂ ಸ್ವಾಧೀನಾನುಭವ ಪ್ರಮಾಣ ಪತ್ರ ಇಲ್ಲದೇ ಇರುವ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಹಾಗೂ ನೀರು ಸರಬರಾಜು ಬ್ಯಾಂಕ್ ಸಾಲ ಸೌಲಭ್ಯಗಳನ್ನು ಒದಗಿಸಬಾರದೆಂದು ಈ ಕೆಳಕಂಡಂತೆ ನಿರ್ದೇಶನ ನೀಡಿರುತ್ತದೆ.

> "(i) While issuing the building planning permission, an undertaking be obtained from the builder/ applicant, as the case may be, to the effect that possession of the building will be entrusted and / or handed over to the owners / beneficiaries only after obtaining completion / occupation certificate from the authorities concerned".
>
> X X X
>
> (iv) All the necessary service connections, such as, Electricity, water supply, sewerage connection, et., shall be given by the service provider / Board to the buildings only after the production of the completion / occupation certificate.

ಈ ಹಿನ್ನೆಲೆಯಲ್ಲಿ, ಸರ್ಕಾರ ಮತ್ತು ಇಲಾಖಾ ಹಂತಗಳಲ್ಲಿ ಸುತ್ತೋಲೆಗಳನ್ನು ಹೊರಡಿಸಿದ್ದು, ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆದ ನಂತರವಷ್ಟೆ ಅಗತ್ಯ ಸೇವೆಗಳಾದ ವಿದ್ಯುತ್, ನೀರು ಸರಬರಾಜು & ಒಳ ಚರಂಡಿ ಸಂಪರ್ಕಗಳನ್ನು ನೀಡುವಂತೆ ಸೂಚಿಸಲಾಗಿದೆ. ಇದರಿಂದ ಉಂಟಾದ ಬೆಳವಣಿಗೆಗಳ ಹಿನ್ನೆಲೆಯಲ್ಲಿ, ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆ ಹಾಗೂ ಮಾನ್ಯ ಉಪ ಮುಖ್ಯಮಂತ್ರಿಯವರು ಮತ್ತು ಸಂಬಂಧಿಸಿದ ಇತರೆ ಮಾನ್ಯ ಸಚಿವರುಗಳ ಉಪಸ್ಥಿತಿಯಲ್ಲಿ ದಿನಾಂಕ:03.07.2025 ರಂದು ನಡೆದ ಸಭೆಯಲ್ಲಿ ರಾಜ್ಯಾದ್ಯಂತ ಸ್ಥಳೀಯ ಸಂಸ್ಥೆಗಳ ಕಾರ್ಯನಿರ್ವಹಣೆಗೆ ಸಂಬಂಧಿಸಿದಂತೆ ಅನ್ವಯವಾಗುವ ಎಲ್ಲಾ ಕಾಯ್ದೆಗಳಲ್ಲಿಯೂ ಕೆಲವೊಂದು ವರ್ಗದ ನಿವೇಶನಗಳಲ್ಲಿ ನಿರ್ಮಿಸುವ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವ ವಿಷಯಕ್ಕೆ ಸಂಬಂಧಿಸಿದಂತೆ ಸಮಾನ ಅವಕಾಶಗಳಿರುವುದು ಸೂಕ್ತವೆಂದು ಅಭಿಪ್ರಾಯಿಸಿ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆಯವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ, ಸೂಕ್ತ ತೀರ್ಮಾನ ಕೈಗೊಳ್ಳಲು ಸೂಚಿಸಲಾಗಿತ್ತು.

ಅದರನ್ವಯ ಸ್ವಾಧೀನ ಪ್ರಮಾಣ ಪತ್ರ (Occupancy Certificate) ದಿಂದ ವಿನಾಯಿತಿ ನೀಡುವ ಕುರಿತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:11.07.2025 ರಂದು ನಗರಾಭಿವೃದ್ಧಿ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಿಗೆ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಕೆಲವು ಕ್ರಮಗಳನ್ನು ಕೈಗೊಳ್ಳಲು ತೀರ್ಮಾನ ಕೈಗೊಳ್ಳಲಾಗಿದೆ.

ಈ ಹಿನ್ನೆಲೆಯಲ್ಲಿ, ಬಿಲ್ಡಿಂಗ್ ಬೈಲಾ ಸರಳೀಕರಣಗೊಳಿಸುವ ಹಾಗೂ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯಲು ಕೆಲವು ಕಟ್ಟಡಗಳಿಗೆ ವಿನಾಯಿತಿ ನೀಡುವ ಬಗ್ಗೆ ಪ್ರಸ್ತಾವನೆಯು ನಗರಾಭಿವೃದ್ಧಿ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ: ಎನರ್ಜಿ 213 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು